# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)

## ವಾರ್ಡ್‌ಸಮಿತಿ ಸಭೆ, ದಿನಾಂಕ: 19.02.2022 ರ

## ಸಭಾ ನಡುವಳಿ

ದಿನಾಂಕ: 19.02.2022 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಶ್ರೀರಾಂಪುರ ಸರ್ಕಾರಿ ಶಾಲೆ ಆರಣದಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಮನೋಜ್ ಜೈನ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ವಿಶೇಷ ಆಯುಕ್ತರು (ಯೋಜನೆ) ಬಿಬಿಎಂಪಿ |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಶ್ರೀರಾಜೇಂದ್ರ ನಾಯಕ್ | ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ, ಯಲಹಂಕ |
| 4 | ಶ್ರೀ ಮುರಳಿಧರ್ ಎಸ್ | ವೈದ್ಯಾಧಿಕಾರಿಗಳು, ಪ್ರಾ. ಆರೋಗ್ಯ ಕೇಂದ್ರ ಅಗ್ರಹಾರ ಬಡಾವಣೆ |
| 5 | ಶ್ರೀಮತಿ ಚಿತ್ರ ಜೆ | ಸ.ಕಾ.ಅ (ಘನತ್ಯಾಜ್ಯ) ಬ್ಯಾಟರಾಯನಪುರ ವಿಭಾಗ ಬಿಬಿಎಂಪಿ |
| 6 | ಶ್ರೀ ಟಿ. ಎಸ್ ಶಿವಣ್ಣ | ಸ.ಕಾ.ಅ, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ |
| 7 | ಶ್ರೀ ವರುಣ್ ಕುಮಾರ್ ಹೆಚ್ | ಸ.ಅ, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ |
| 8 | ಶ್ರೀ ಕಿರಣ್ ಕುಮಾರ್ | ಸ.ಅ, ಬೆಸ್ಕಾಂ ಉಪ ವಿಭಾಗ, ನಾಗವಾರ |
| 9 | ಶ್ರೀ ಪಿ.ಎಂ ಮಲೆಯಾದ್ರಿ | ತೋಟಗಾರಿಕೆ ನಿರೀಕ್ಷಕರು, ಯಲಹಂಕ ವಲಯ |
| 10 | ಶ್ರೀ ಸೋಮಶೇಖರ್ | ವ್ಯವಸ್ಥಾಪಕರು, ಕಂದಾಯ ಉಪ ವಿಭಾಗ |
| 11 | ಶ್ರೀ ಮುತ್ತುರಾಜು ಕೆ.ಪಿ | ಅರಣ್ಯ ವಿಭಾಗ, ಬಿಬಿಎಂಪಿ ಬೆಂಗಳೂರು |
| 12 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 13 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. ಶ್ರೀಮತಿ ಚಿತ್ರಾ ಸ.ಕಾ.ಅ (ಘನತ್ಯಾಜ್ಯ) ರವರು ಮಾತನಾಡಿ ಸದರಿ ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಗೆ ಹೆಚ್ಚುವರಿಯಾಗಿ ಹಸಿಕಸಕ್ಕೆ 14 ಆಟೋ ಟಿಪ್ಪರ್ ಹಾಗೂ ಒಣಕಸಕ್ಕೆ 10 ಆಟೋ ಟಿಪ್ಪರ್



Scanned by CamScanner

ಹಾಗೂ 90ಜನ ಪೌರಕಾರ್ಮಿಕರನ್ನು ಕೂಡಲೇ ನಿಯೋಜಿಸಲು ಕೋರಿದರು ಹಾಗೂ ಬ್ಲಾಕ್‌ಸ್ಪಾಟ್‌ಗಳ ಸೌಂದರಿಕರಣಕ್ಕೆ ಅಗತ್ಯ ಸಾಮಗ್ರಿಗಳನ್ನು ಒದಗಿಸುವಂತೆ ಕೋರಿದರು. ಈ ಬಗ್ಗೆ ಮಾನ್ಯ ಅಧ್ಯಕ್ಷರು ರವರು ಮಾತನಾಡಿ ಸದರಿ ವಿಷಯದ ಬಗ್ಗೆ ಕೂಡಲೇ ಕ್ರಮ ವಹಿಸಿ ಅಗತ್ಯ ಪ್ರಸ್ತಾವನೆಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ಸೂಚನೆ ನೀಡಿದರು.

2. ಶ್ರೀ ಪಿ.ಎಂ ಮಲಯಾದ್ರಿ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಉದ್ಯಾನವನಗಳ ನಿರ್ವಹಣೆ ಬಗ್ಗೆ ಮಾತನಾಡಿ 4 ವಲಯಕ್ಕೆ ಒಂದು ನರ್ಸರಿಯಿದ್ದು, ಯಲಹಂಕ ವಲಯಕ್ಕೆ ಪ್ರತ್ಯೇಕವಾಗಿ ಯಾವುದೇ ನರ್ಸರಿಗಳು ಇಲ್ಲದ ಕಾರಣ ಉದ್ಯಾನವನದಲ್ಲಿ ಹೆಚ್ಚಿನ ಗಿಡಗಳನ್ನು ನೆಡಲು ಕಷ್ಟಸಾಧ್ಯವಾಗಿರುತ್ತದೆ ಹಾಗೂ ಕೂಡಲೇ ಯಲಹಂಕ ವಲಯಕ್ಕೆ ಒಂದು ನರ್ಸರಿಯನ್ನು ತೆರೆಯಲು ಕ್ರಮ ವಹಿಸಬೇಕಾಗಿರುತ್ತದೆ ಎಂದು ಕೋರಿದರು. ಈ ಬಗ್ಗೆ ಮಾನ್ಯ ಅಧ್ಯಕ್ಷರು ರವರು ಮಾತನಾಡಿ ಈ ಬಗ್ಗೆ ಕೂಡಲೇ ಪ್ರಸ್ತಾವನೆ ಸಲ್ಲಿಸುವಂತೆ ಸೂಚನೆ ನೀಡಿದರು.

3. ಬೀದಿ ದೀಪಗಳ ನಿರ್ವಹಣೆ ಬಗ್ಗೆ ಮಾತನಾಡಿ ವಾರ್ಡ್ ವ್ಯಾಪ್ತಿಯ ಹಲವಾರು ಕಡೆಗಳಲ್ಲಿ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರ ದೂರವಾಣಿ ಸಂಖ್ಯೆಯನ್ನು ಪ್ರದರ್ಶನ ಮಾಡುವಂಥೆ ಸೂಚನೆ ನೀಡಲಾಯಿತು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಲು ಸೂಚನೆ ನಿಡಲಾಯಿತು ಈ ಬಗ್ಗೆ ವಾರ್ಡ್‌ಗೆ ಸುಮಾರು 2000 ಹೊಸದಾಗಿ ವಿದ್ಯುತ್ ಬಲ್ಬ್‌ಗಳನ್ನು ಒದಗಿಸುವಂತೆ ಕ್ರಮ ವಹಿಸಲು ಪ್ರಸ್ತಾವನೆ ಸಲ್ಲಿಸಲು ಸೂಚನೆ ನೀಡಲಾಯಿತು

4. ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ /ವಾಹನ ಸವಾರರ ಓಡಾಟಕ್ಕೆ ತೊಂದರೆಯಾಗುವಂತೆ ರಸ್ತೆ ಮಧ್ಯ, ಪಾದಚಾರಿ ಮಾರ್ಗ ಹಾಗೂ ಚರಂಡಿಗಳಲ್ಲಿ ಇರುವ ವಿದ್ಯುತ್ ಕಂಬಗಳನ್ನು ಕೂಡಲೇ ರಸ್ತೆ ಬದಿಗೆ ಸ್ಥಳಾಂತರ ಮಾಡಲು ಕ್ರಮ ವಹಿಸಲು ಬೆಸ್ಕಾಂ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

5. ವಾರ್ಡ್ ವ್ಯಾಪ್ತಿಯಲ್ಲಿ ಪಾಲಿಕೆಯಿಂದ ಕೊರೆಯಲಾದ ಬೋರ್‌ವೆಲ್‌ಗಳ ವಿದ್ಯುತ್ ಬಿಲ್ ಪಾವತಿಯ ಬಗ್ಗೆ ಬೆಸ್ಕಾಂ ಅಧಿಕಾರಿಗಳು ಚರ್ಚಿಸಲಾಗಿ ಈ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ ಸದರಿ ಕೊಳವೆ ಬಾವಿಗಳಲ್ಲಿ ಜಲಮಂಡಳಿಯಿಂದ ಹಾಗೂ ಪಾಲಿಕೆಯಿಂದ ನಿರ್ವಹಣೆ ಮಾಡುತ್ತಿರುವ ಕೊಳವೆ ಬಾವಿಗಳನ್ನು ಪಟ್ಟಿ ಮಾಡಿ ಆಯಾ ಇಲಾಖೆಯಿಂದ ಕೊಳವೆ ಬಾವಿಗಳ ವಿದ್ಯುತ್ ಬಿಲ್ ಪಾವತಿಸಲು ಕೂಡಲೇ ಕ್ರಮ ವಹಿಸುವಂತೆ ಸೂಚನೆ ನೀಡಿದರು.

6. ವಾರ್ಡ್ ವ್ಯಾಪ್ತಿಯ ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆಯ ನಿವಾಸಿಯಾದ ಶ್ರೀ ಸಂಪತ್(9844162590) ರವರು ಸ್ವಯಂ ಮನೆಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಹಸಿ ಕಸ ಮತ್ತು ಒಣಕಸವಾಗಿ ಬೇರ್ಪಡಿಸಿ ಹಸಿಕಸವನ್ನು ಮನೆಯಲ್ಲಿಯೇ ಸಾವಯವ ಗೊಬ್ಬರ ಮಾಡಿ ಮನೆಯ ಕೈತೋಟಕ್ಕೆ ಉಪಯೋಗಿಸಿಕೊಳ್ಳುತ್ತಿರುವುದಾಗಿ ಸಭೆಗೆ ತಿಳಿಸಿದರು ಈ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ ಶ್ರೀ ಸಂಪತ್ ರವರಿಗೆ ಪ್ರಶಂಶೆ ವ್ಯಕ್ತಪಡಿಸಿದರು

7. ಶ್ರೀಮತಿ ರುಮಾನ್ ಸೋಫೀಯಾ ಪಬ್ಲಿಕ್ ಶಾಲೆಯ ಪ್ರಾಂಶುಪಾಲರು ಮಾತನಾಡಿ ಚೊಕ್ಕನಹಳ್ಳಿ ಮುಖ್ಯರಸ್ತೆಯಲ್ಲಿ ಛೇಂಬರ್‌ನಿಂದ ತ್ಯಾಜ್ಯ ನೀರು ಉಕ್ಕಿ ಹರಿಯುತ್ತಿರುವುದರಿಂದ ಸಾರ್ವಜನಿರಕರ ಓಡಾಟಕ್ಕೆ ಹಾಗೂ ವಾಹನ ಸವಾರರ ಓಡಾಟಕ್ಕೆ ತೊಂದರೆಯುಟಾಗುವುದಲ್ಲದೇ ಸಾರ್ವಜನಿಕರಿಗೆ ಆರೋಗ್ಯದ ಸಮಸ್ಯೆ ಉಂಟಾಗುತ್ತದೆಂದು ತಿಳಿಸಿದರು ಹಾಗೂ ಮುಖ್ಯರಸ್ತೆಯಲ್ಲಿ ಚಂರಂಡಿಗೆ ಸ್ಲಾಬ್‌ಗಳನ್ನು ಅಳವಡಿಸಿರುವುದಿಲ್ಲವೆಂದು ತಿಳಿಸಿದರು ಈ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ ಕೂಡಲೇ ಕ್ರಮ ವಹಿಸುವಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

8. ವಾರ್ಡ್ ವ್ಯಾಪ್ತಿಯು ದೊಡ್ಡದಾಗಿರುವುದರಿಂದ ಹಾಲಿ ಚರಂಡಿಗಳಲ್ಲಿ ಹೂಳು ತೆಗೆಯುವ ಕಾಮಗಾರಿ ನಿರ್ವಹಿಸುವ ಸಿಲ್ಟ್ ಅಂಡ್ ಟ್ರಾಕ್ಟರ್ ಕಾಮಗಾರಿಯಲ್ಲಿ ಒಂದು ಟ್ರಾಕ್ಟರ್ ಇರುವುದರಿಂದ ಸಾರ್ವಜನಿಕರ ದೂರುಗೆ ಸಂಬಂಧಿಸಿದಂತೆ ಕೂಡಲೇ ಸ್ಪಂದಿಸಿ ಕಾರ್ಯನಿರ್ವಹಿಸಲು ಕಷ್ಟಸಾಧ್ಯವಾಗಿರುತ್ತವೆ ಆದುದರಿಂದ



Scanned by CamScanner

ಹೆಚ್ಚುವರಿ ಇನ್ನೊಂದು ಟ್ರಾಕ್ಟರ್ ನೀಡುವಂತೆ ಕೋರಿದರು ಈ ಬಗ್ಗೆ ಕೂಡಲೇ ಪ್ರಸ್ತಾವನೆ ಸಲ್ಲಿಸುವಂತೆ ಸೂಚನೆ ನೀಡಿದರು.

9. ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆ ನಾಗರೀಕರು ಮಾತನಾಡಿ ಬಡಾವಣೆಯಲ್ಲಿ ದೇವಸ್ಥಾನ ಹತ್ತಿರ ರಸ್ತೆ ಕಂಬಗಳನ್ನು ಅಳವಡಿಸಿ ಬೀದಿ ದೀಪಗಳನ್ನು ಅಳವಡಿಸಲು ಕೊರಿದರು ಈ ಬಗ್ಗೆ ಬೆಸ್ಕಾಂ ಅಧಿಖಾರಿಗಳಿಗೆ ಕೂಡಲೇ ಸ್ಥಳ ಪರಿಶೀಲಿಸಿ ಕ್ರಮ ವಹಿಸಲು ಸೂಚನೆ ನೀಡಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್-19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾಸುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಕಡ್ಡಾಯವಾಗಿ ಬಿ.ಡಬ್ಲೂ.ಎಸ್.ಎಸ್.ಬಿ ಇಲಾಖೆಯ ಅಧಿಖಾರಿಗಳು ತಪ್ಪದೇ ಸಭೆಗೆ ಹಾಜರಿರುವಂತೆ ಕ್ರಮ ವಹಿಸಲು ಕಾರ್ಯದರ್ಶಿಯವರಿಗೆ ಸೂಚಿಸಿ ಹಾಗೂ ಸಂಬಧಪಟ್ಟ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡೆಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.

Scanned by CamScanner